ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: Speaker

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 18/12/19

# ವಿಧಾನಸಭಾಧ್ಯಕ್ಷರ ಸಮ್ಮೇಳನಕ್ಕೆ ಕಾಗೇರಿ

ಬೆಂಗಳೂರು: ಉತ್ತರಾಖಂಡ್‌ನ ರಾಜಧಾನಿ ಡೆಹ್ರಾಡೂನ್‌ನಲ್ಲಿ ಡಿ.17 ರಿಂದ 19 ರವರೆಗೆ ನಡೆಯಲಿರುವ ಶಾಸಕಾಂಗ ಸಂಸ್ಥೆಗಳ ಸಭಾಧ್ಯಕ್ಷರ 79ನೇ ಸಮ್ಮೇಳನಕ್ಕೆ ರಾಜ್ಯ ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ತೆರಳಿದ್ದಾರೆ. ಎರಡು ದಿನದ ಸಮ್ಮೇಳನದಲ್ಲಿ ಸಂವಿಧಾನದ 10ನೇ ಪರಿಚ್ಛೇದ.ಹಾಗೂ ಸಭಾಧ್ಯಕ್ಷರ ಪಾತ್ರ ಮತ್ತು ವಿಧಾನ ಮಂಡಲದ ಕಾರ್ಯಕಲಾಪಗಳ ಮೂಲಕ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆ ಬಲಗೊಳಿಸುವ ಕುರಿತು ಚರ್ಚೆ ನಡೆಯಲಿದೆ. ಸಮ್ಮೇಳನದ ನಂತರ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಡಿ.21 ರಂದು ಬೆಂಗಳೂರಿಗೆ ಆಗಮಿಸಲಿದ್ದಾರೆ ಎಂದು ವಿಧಾನಸಭಾಧ್ಯಕ್ಷ ಆಪ್ತ ಕಾರ್ಯದರ್ಶಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.